ಶ್ರೀ ಎಸ್.ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2009ರ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು" ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–11)

ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2009

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2009 ರ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು" ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2009ರ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು" ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 1 ಇತ್ಯಾದಿ :

ಶ್ರೀ ಎಸ್.ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ: "ಖಂಡ 1ಕ್ಕೆ ನಾನು ಈ ಕೆಳಕಂಡ ತಿದ್ದುಪಡಿಯನ್ನು ಮಂಡಿಸುತ್ತೇನೆ.

ವಿಧೇಯಕದ 1ನೇ ಖಂಡದ (2)ನೇ ಉಪ-ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(2) ಇದು 2009ರ ಜನವರಿ ಒಂದನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು"

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

ವಿಧೇಯಕದ 1ನೇ ಖಂಡದ (2)ನೇ ಉಪ ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(2) ಇದು 2009ರ ಜನವರಿ ಒಂದನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 1 ತಿದ್ದುಪಡಿಯಾದ ರೀತಿಯಲ್ಲಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಖಂಡ 1 ತಿದ್ದುಪಡಿಯಾದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಖಂಡ 1 ತಿದ್ದುಪಡಿಯಾದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 2 ರಿಂದ 18 ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 18ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 18 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 19

ಶ್ರೀ ಎಸ್.ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ: "ಖಂಡ 19ಕ್ಕೆ ನಾನು ಈ ಕೆಳಕಂಡ ತಿದ್ದುಪಡಿಯನ್ನು ಮಂಡಿಸುತ್ತೇನೆ.

ವಿಧೇಯಕದ 19ನೇ ಖಂಡದ (1)ನೇ ಉಪ–ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:–

"(1) (ಜಿಜಿ) ಖಂಡದಲ್ಲಿ "ಐದು ಸಾವಿರ ರೂಪಾಯಿಗಳು ಪ್ರತಿ ತಿಂಗಳಿಗೆ" ಎಂಬ ಪದಗಳಿಗೆ "ಏಳೂವರೆ ಸಾವಿರ ರೂಪಾಯಿಗಳು ಪ್ರತಿ ತಿಂಗಳಿಗೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

ವಿಧೇಯಕದ 19ನೇ ಖಂಡದ (1)ನೇ ಉಪ–ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:–

"(1) (ಜಿಜಿ) ಖಂಡದಲ್ಲಿ "ಐದು ಸಾವಿರ ರೂಪಾಯಿಗಳು ಪ್ರತಿ ತಿಂಗಳಿಗೆ" ಎಂಬ ಪದಗಳಿಗೆ "ಏಳೂವರೆ ಸಾವಿರ ರೂಪಾಯಿಗಳು ಪ್ರತಿ ತಿಂಗಳಿಗೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 19 ತಿದ್ದುಪಡಿಯಾದ ರೀತಿಯಲ್ಲಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಖಂಡ 19 ತಿದ್ದುಪಡಿಯಾದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಖಂಡ 19 ತಿದ್ದುಪಡಿಯಾದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ತಿದ್ದುಪಡಿಯಾದ ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ತಿದ್ದುಪಡಿಯಾದ ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2009ರ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿಯಾದಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಏನೆಂದರೆ, "2009ರ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕಗಳನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

4. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕ, 2009

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಸ್. ಎ. ರವೀಂದ್ರನಾಥ್ (ಕೃಷಿ ಸಚಿವರು) : ಮಾನ್ಯ ಅಧ್ಯಕ್ಷರೆ, "2009ರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ವಿಧೇಯಕವನ್ನು" ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.